# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 983

2) ಸದಸ್ಯರ ಹೆಸರು : ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು)

3) ಉತ್ತರಿಸಬೇಕಾದ ದಿನಾಂಕ : 20-08-2025

4) ಉತ್ತರಿಸಬೇಕಾದ ಸಚಿವರು : ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ಸಾಂಪ್ರದಾಯಿಕ ಮೀನುಗಾರರು ತಮ್ಮ ಹಡಗುಗಳನ್ನು ಆಳಸಮುದ್ರ ಮೀನುಗಾರಿಕೆ ದೋಣಿಗಳಾಗಿ ಪರಿವರ್ತಿಸಲು ಸರ್ಕಾರವು ಆರ್ಥಿಕ ನೆರವು ನೀಡುತ್ತಿದೆಯೇ; | ಹೌದು. ಕೇಂದ್ರ ಪುರಸ್ಕೃತ ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆಯಡಿ ಸಾಂಪ್ರದಾಯಿಕ ಮೀನುಗಾರರು ಟ್ರಾಲರ್ ದೋಣಿಗಳನ್ನು ಆಳಸಮುದ್ರ ದೋಣಿಗಳಾಗಿ ಪರಿವರ್ತಿಸಲು ಘಟಕ ವೆಚ್ಚ ರೂ.120.00 ಲಕ್ಷಗಳಿಗೆ ಸಾಮಾನ್ಯ ವರ್ಗಕ್ಕೆ ಶೇ.40ರಷ್ಟು, ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ /ಮಹಿಳಾ ಫಲಾನುಭವಿಗಳಿಗೆ ಶೇ.60ರಷ್ಟು ಸಹಾಯಧನ ನೀಡಲಾಗುತ್ತಿದೆ. |
| ಆ) | ಕಳೆದ ಮೂರು ವರ್ಷಗಳಲ್ಲಿ ಈ ಆರ್ಥಿಕ ಸಹಾಯವನ್ನು ಪಡೆದ ಮೀನುಗಾರರ ಸಂಖ್ಯೆ ಎಷ್ಟು; | ಕರ್ನಾಟಕದಲ್ಲಿ ಇದುವರೆಗೂ 41 ಆಳಸಮುದ್ರ ದೋಣಿಗಳ ನಿರ್ಮಾಣಕ್ಕೆ ಅನುಮೋದನೆ ನೀಡಲಾಗಿದೆ. ಕಳೆದ ಮೂರು ವರ್ಷಗಳಲ್ಲಿ 24 ದೋಣಿಗಳಿಗೆ ಪೂರ್ಣ ಸಹಾಯಧನ ನೀಡಲಾಗಿದೆ. 17 ದೋಣಿಗಳು ನಿರ್ಮಾಣದ ವಿವಿಧ ಹಂತದಲ್ಲಿದ್ದು ಭಾಗಶಃ ಸಹಾಯಧನ ನೀಡಲಾಗಿದೆ. |
| ಇ) | ಮೀನುಗಾರಿಕೆಯನ್ನು ಹೆಚ್ಚಿಸಲು ಅಸ್ತಿತ್ವದಲ್ಲಿರುವ ದೋಣಿಗಳನ್ನು ಆಳ ಸಮುದ್ರ ಮೀನುಗಾರಿಕೆ ದೋಣಿಗಳಾಗಿ ಬದಲಾಯಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ಸಾಂಪ್ರದಾಯಿಕ ಮೀನುಗಾರರು ಟ್ರಾಲರ್ ದೋಣಿಗಳನ್ನು ಆಳಸಮುದ್ರ ದೋಣಿಗಳಾಗಿ ಪರಿವರ್ತಿಸಲು ಕೇಂದ್ರ ಪುರಸ್ಕೃತ ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆಯಡಿ 114 ಗುರಿಗಳನ್ನು ನಿಗದಿಪಡಿಸಿದ್ದು, ಒಟ್ಟು ರೂ. 5904.00 ಲಕ್ಷ (ಕೇಂದ್ರದ ಪಾಲು ರೂ.3542.40 ಲಕ್ಷ, ರಾಜ್ಯದ ಪಾಲು ರೂ.2361.60 ಲಕ್ಷ)ಗಳ ಸಹಾಯಧನ ಪಾವತಿಸಲು ಅನುದಾನ ನಿಗದಿಪಡಿಸಲಾಗಿದೆ. |

ಸಂಖ್ಯೆ: ಪಸಂಮೀ ಇ-151 ಮೀಇಇ 2025

(ಮಂಕಾಳ ಎಸ್. ವೈದ್ಯ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು